# All India Radio: Bangalore
# National Bulletin In Kannada
# 29.08.2025 19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಮುಂದಿನ ೧೦ ವರ್ಷಗಳಲ್ಲಿ ಭಾರತದಲ್ಲಿ ಜಪಾನ್‌ನಿಂದ ೧೦ ಟ್ರಿಲಿಯನ್ ಯೆನ್ ಹೂಡಿಕೆ ನಿರೀಕ್ಷೆ - ಪ್ರಧಾನಿ ನರೇಂದ್ರ ಮೋದಿ
2. ರಾಷ್ಟ್ರಪತಿಯವರಿಂದ ಸಾರ್ವಜನಿಕ ವಲಯದ ಉದ್ಯಮಗಳಿಗೆ ಸ್ಕೋಪ್ ಶ್ರೇಷ್ಠತಾ ಪ್ರಶಸ್ತಿ ಪ್ರದಾನ
3. ೨೦೩೦ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರ ದ್ವಿಗುಣಗೊಳಿಸಲು ಭಾರತ-ಆಫ್ರಿಕಾ ನಿರ್ಧಾರ
4. ಬಿಡಬ್ಲ್ಯೂಎಫ್ ಬ್ಯಾಡ್ಮಿಂಟನ್ ವಿಶ್ವ ಚಾಂಪಿಯನ್‌ಶಿಪ್ : ಪುರುಷರ ಡಬಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿಂದು ಸಾತ್ವಿಕ್-ಚಿರಾಗ್‌ಶೆಟ್ಟಿ, ಅರನ್-ಸೊಹ್ ಮುಖಾಮುಖಿ

<><><><>

ಮುಂದಿನ ೧೦ ವರ್ಷಗಳಲ್ಲಿ ಭಾರತದಲ್ಲಿ ಜಪಾನ್‌ನಿಂದ ೧೦ ಟ್ರಿಲಿಯನ್ ಯೆನ್‌ಗಳ ಹೂಡಿಕೆಯ ಗುರಿಯನ್ನು ಉಭಯ ದೇಶಗಳು ಹೊಂದಿವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಟೋಕಿಯೋದಲ್ಲಿಂದು ೧೫ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಜಪಾನ್ ಪ್ರಧಾನಿ ಶಿಗೇರು ಇಶಿಬಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಂತರ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಭಾರತ ಮತ್ತು ಜಪಾನ್‌ನ ಸಣ್ಣ ಮತ್ತು ಮಧ್ಯಮ ಉದ್ಯಮಗಳು ಹಾಗೂ ನವೋದ್ಯಮಗಳನ್ನು ಸಂಪರ್ಕಿಸುವ ಬಗ್ಗೆ ವಿಶೇಷ ಒತ್ತು ನೀಡಲಾಗುವುದು ಎಂದರು. ಭಾರತದ ಪ್ರತಿಭೆ ಮತ್ತು ಜಪಾನ್‌ನ ತಂತ್ರಜ್ಞಾನದ ಸಂಯೋಜನೆಯಿಂದ ಈ ಶತಮಾನದಲ್ಲಿ ತಾಂತ್ರಿಕ ಕ್ರಾಂತಿಯನ್ನು ಮಾಡಬಹುದು ಎಂದು ಅವರು ಹೇಳಿದರು. ಭಾರತದ ಅಭಿವೃದ್ಧಿ ಪಯಣದಲ್ಲಿ ಜಪಾನ್ ಮೊದಲಿನಿಂದಲೂ ಅತ್ಯಂತ ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ. ಮೆಟ್ರೋದಿಂದ ಉತ್ಪಾದನೆವರೆಗೆ, ನವೋದ್ಯಮಗಳಿಂದ ಸೆಮಿಕಂಡಕ್ಟರ್‌ವರೆಗೆ ನಾನಾ ವಲಯಗಳಲ್ಲಿ ಜಪಾನ್ ಕಂಪನಿಗಳು ೪೦ ಬಿಲಿಯನ್ ಡಾಲರ್‌ಗೂ ಅಧಿಕ ಬಂಡವಾಳವನ್ನು ಹೂಡಿಕೆ ಮಾಡಿವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

**ಧ್ವನಿ : ಪ್ರಧಾನಿ (೩೮ ಸೆಕೆಂಡ್‌ಗಳು)**

<><><><>

ನವದೆಹಲಿಯಲ್ಲಿ ಇಂದು ಸಾರ್ವಜನಿಕ ವಲಯದ ಉದ್ಯಮಗಳಿಗೆ ೨೦೨೨-೨೩ ಸ್ಕೋಪ್ ಶ್ರೇಷ್ಠತಾ ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು. ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಯವರು, ಕೇಂದ್ರ ಸಾರ್ವಜನಿಕ ವಲಯದ ಉದ್ಯಮಗಳು-ಸಿಪಿಎಸ್ಇ, ಸಾರ್ವಜನಿಕ ವಲಯದ ಉದ್ಯಮಗಳು, ಸ್ವಾತಂತ್ರ್ಯದ ನಂತರ ಆರ್ಥಿಕ ಬೆಳವಣಿಗೆ ಮತ್ತು ಸಾಮಾಜಿಕ ಸೇರ್ಪಡೆಗೆ ಪ್ರಬಲ ಸಾಧನವಾಗಿದೆ ಎಂದು ಹೇಳಿದರು. ಸಿಪಿಎಸ್ಇಗಳು ಕೈಗಾರಿಕೀಕರಣ, ಮೂಲಸೌಕರ್ಯ ಅಭಿವೃದ್ಧಿ, ಸಾಮಾಜಿಕ ಉನ್ನತಿ ಮತ್ತು ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಗೆ ಅಡಿಪಾಯ ಹಾಕಿವೆ ಎಂದರು. ಆರ್ಥಿಕ ಮತ್ತು ಆರ್ಥಿಕ ಕೊಡುಗೆಗಳ ಜೊತೆಗೆ, ಸಿಪಿಎಸ್ಇಗಳು ಸಮತೋಲಿತ ಮತ್ತು ಅಂತರ್ಗತ ಬೆಳವಣಿಗೆಗೆ ಆದ್ಯತೆ ನೀಡಿವೆ. ಅಲ್ಲದೇ ರಾಷ್ಟ್ರೀಯ ಗುರಿಗಳನ್ನು ಅತ್ಯಂತ ಪ್ರಮುಖವಾಗಿರಿಸಿಕೊಂಡಿವೆ ಎಂದು ಅವರು ತಿಳಿಸಿದರು. ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವ ರಾಷ್ಟ್ರೀಯ ಗುರಿಯನ್ನು ಸಾಧಿಸುವಲ್ಲಿ ಸಿಪಿಎಸ್ಇಗಳು ನಿರ್ಣಾಯಕ ಪಾತ್ರ ವಹಿಸುತ್ತವೆ. ಸಿಪಿಎಸ್ಇಗಳು ಆತ್ಮನಿರ್ಭರ ಭಾರತವನ್ನು ನಿರ್ಮಿಸುವ ದಿಕ್ಕಿನಲ್ಲಿ ಪರಿಣಾಮಕಾರಿ ಪಾತ್ರ ವಹಿಸುತ್ತಿವೆ ಮತ್ತು ಅವು ಮೇಕ್-ಇನ್-ಇಂಡಿಯಾ ಅಭಿಯಾನಕ್ಕೆ ಗಮನಾರ್ಹ ಕೊಡುಗೆ ನೀಡುತ್ತಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

<><><><>

ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಸಂದರ್ಭದಲ್ಲಿ ನವದೆಹಲಿಯ ರಾಷ್ಟ್ರಪತಿ ಭವನದ ಅಮೃತ ಉದ್ಯಾನದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕ್ರೀಡಾಪಟುಗಳೊಂದಿಗೆ ಸಂವಾದ ನಡೆಸಿದರು. ರಾಷ್ಟ್ರೀಯ ಕ್ರೀಡಾ ದಿನದ ಹಿನ್ನೆಲೆಯಲ್ಲಿ ಕ್ರೀಡಾಪಟುಗಳಿಗೆ ಇಂದು ಅಮೃತ ಉದ್ಯಾನಕ್ಕೆ ವಿಶೇಷ ಪ್ರವೇಶ ಕಲ್ಪಿಸಲಾಗಿದೆ. ಮುಂದಿನ ತಿಂಗಳು ೧೪ರವರೆಗೆ ಉದ್ಯಾನ ತೆರೆದಿರುತ್ತದೆ. ಸಂದರ್ಶಕರು ಆನ್‌ಲೈನ್ ಮೂಲಕವೂ ಟಿಕೆಟ್ ಕಾಯ್ದಿರಿಸಬಹುದು. ಅಮೃತ ಉದ್ಯಾನಕ್ಕೆ ಪ್ರವೇಶ ಉಚಿತವಾಗಿದೆ.

<><><><>

ಕಟ್ಟಡ ಸಾಮಗ್ರಿಗಳ ಅಂತಾರಾಷ್ಟ್ರೀಯ ಪ್ರದರ್ಶನ ೨೦೨೬ ರ ಏಪ್ರಿಲ್ ೨೯ ರಿಂದ ಮೇ ೨ ರವರೆಗೆ ನವದೆಹಲಿಯಲ್ಲಿ ನಡೆಯಲಿದೆ. ಈ ಪ್ರದರ್ಶನದಲ್ಲಿ ೩೦ ಸಾವಿರಕ್ಕೂ ಹೆಚ್ಚು ದೇಶೀಯ ಸಂದರ್ಶಕರು ಮತ್ತು ೧೦೦ ದೇಶಗಳ ೧ ಸಾವಿರ ಅಂತಾರಾಷ್ಟ್ರೀಯ ಖರೀದಿದಾರರು ಭಾಗವಹಿಸುವ ನಿರೀಕ್ಷೆಯಿದೆ. ಈ ಕುರಿತು ನವದೆಹಲಿಯಲ್ಲಿಂದು ಮಾಹಿತಿ ನೀಡಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಈ ಪ್ರದರ್ಶನವು ಜಾಗತಿಕ ಖರೀದಿದಾರರು, ದೇಶೀಯ ಸಂದರ್ಶಕರು ಮತ್ತು ಸರ್ಕಾರಿ ಪ್ರತಿನಿಧಿಗಳನ್ನು ಒಂದೇ ಸ್ಥಳದಲ್ಲಿ

ಒಂದುಗೂಡಿಸುತ್ತದೆ ಎಂದು ಹೇಳಿದರು. ಈ ಕಾರ್ಯಕ್ರಮವು ಭಾರತೀಯ ಕೈಗಾರಿಕೆಗಳು ತಮ್ಮ ಉತ್ಪನ್ನಗಳನ್ನು ಜಾಗತಿಕ ವೇದಿಕೆಯಲ್ಲಿ ಪ್ರದರ್ಶಿಸಲು ಒಂದು ಅವಕಾಶವಾಗಿದೆ ಎಂದರು. ಪ್ರಸ್ತುತ ಪರಿಸ್ಥಿತಿಯನ್ನು ನಿರ್ವಹಿಸುವಲ್ಲಿ ಉದ್ಯಮವು ತೊಂದರೆಗಳನ್ನು ಎದುರಿಸದಂತೆ ನೋಡಿಕೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ಸಚಿವ ಪಿಯೂಶ್ ಗೋಯಲ್ ಹೇಳಿದರು.

<><><><>

೨೦೩೦ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರ ದ್ವಿಗುಣಗೊಳಿಸಲು ಭಾರತ ಮತ್ತು ಆಫ್ರಿಕಾ ಸಂಬಂಧದ ಮೇಲೆ ಕೆಲಸ ಮಾಡುವುದಾಗಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ೧೦ನೇ ಸಿಐಐ ಇಂಡಿಯಾ-ಆಫ್ರಿಕಾ ಉದ್ಯಮ ಸಮಾವೇಶದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತ ಮತ್ತು ಆಫ್ರಿಕಾ ನಡುವಿನ ವ್ಯಾಪಾರ ಸಾಕಷ್ಟು ಸಮತೋಲಿತವಾಗಿದೆ. ಭಾರತದ ರಫ್ತು ಮತ್ತು ಆಮದು ಕ್ರಮವಾಗಿ ೪೨.೭ ಬಿಲಿಯನ್ ಡಾಲರ್ ಮತ್ತು ೪೦ ಬಿಲಿಯನ್ ಡಾಲರ್ ಆಗಿದೆ ಎಂದು ತಿಳಿಸಿದರು. ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ಆಫ್ರಿಕಾಗೆ ಭಾರತ ನೀಡಿದ ಬೆಂಬಲವನ್ನು ಇದೇ ವೇಳೆ ಸಚಿವರು ಸ್ಮರಿಸಿದರು.

<><><><>

ದೇಶದಲ್ಲಿ ಅಪರಾಧ ನ್ಯಾಯ ವ್ಯವಸ್ಥೆಯಲ್ಲಿ ವಿಧಿವಿಜ್ಞಾನ ಸಾಕ್ಷ್ಯ ಆಧಾರಿತ ವಿಧಾನಕ್ಕೆ ಕೇಂದ್ರ ಸರ್ಕಾರ ಆದ್ಯತೆ ನೀಡುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಗುವಾಹಟಿಯಲ್ಲಿ ಇಂದು ಹೊಸದಾಗಿ ನಿರ್ಮಿಸಲಾದ ರಾಜಭವನದ ಬ್ರಹ್ಮಪುತ್ರ ವಿಭಾಗವನ್ನು ಅವರು ಉದ್ಘಾಟಿಸಿದರು. ನಂತರ ಗೋಲಾಘಾಟ್‌ನಲ್ಲಿ ರಾಷ್ಟ್ರೀಯ ಸೈಬರ್ ವಿಧಿವಿಜ್ಞಾನ ಪ್ರಯೋಗಾಲಯದ ಉದ್ಘಾಟನೆ ಮತ್ತು ಸಶಸ್ತ್ರ ಪಡೆಗಳಿಗಾಗಿ ವಿವಿಧ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ ನೆರವೇರಿಸಿದರು. ಈ ವೇಳೆ ಮಾತನಾಡಿದ ಸಚಿವರು, ಸೈಬರ್ ಭದ್ರತೆ ಮತ್ತು ವಿಧಿವಿಜ್ಞಾನ ವಿಜ್ಞಾನ ನಾಗರಿಕರಿಗೆ ಬಹಳ ಮುಖ್ಯ. ಏಕೆಂದರೆ ಅದು ನಾಗರಿಕರು ಕಷ್ಟಪಟ್ಟು ಗಳಿಸಿದ ಆದಾಯ ಮತ್ತು ಇಡೀ ದೇಶವನ್ನು ರಕ್ಷಿಸುತ್ತದೆ ಎಂದರು. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ನಾಗರಿಕರಿಗೆ ನ್ಯಾಯ ಒದಗಿಸಲು ಮತ್ತು ಅಪರಾಧ ನ್ಯಾಯ ವ್ಯವಸ್ಥೆಯನ್ನು ಜನ-ಕೇಂದ್ರಿತ ಮತ್ತು ವೈಜ್ಞಾನಿಕವಾಗಿಸಲು ಕೇಂದ್ರ ಸರ್ಕಾರ, ಬ್ರಿಟಿಷ್ ಯುಗದ ಭಾರತೀಯ ದಂಡ ಸಂಹಿತೆಯನ್ನು ರದ್ದುಗೊಳಿಸುವ ಮೂಲಕ ಮೂರು ಹೊಸ ಕಾನೂನುಗಳನ್ನು ಜಾರಿಗೆ ತಂದಿದೆ ಎಂದು ಸಚಿವ ಅಮಿತ್ ಶಾ ಹೇಳಿದರು.

<><><><>

೨೦೨೫-೨೬ರ ಹಣಕಾಸು ವರ್ಷದ ಏಪ್ರಿಲ್‌ನಿಂದ ಜೂನ್ ತ್ರೈಮಾಸಿಕದಲ್ಲಿ ಭಾರತದ ನೈಜ ಜಿಡಿಪಿ ಶೇಕಡ ೭.೮ರಷ್ಟು ಬೆಳವಣಿಗೆ ಹೊಂದುವ ನಿರೀಕ್ಷೆಯಿದೆ. ಕಳೆದ ಹಣಕಾಸು ವರ್ಷದ ೪ನೇ

ತ್ರೈಮಾಸಿಕದಲ್ಲಿ ಜಿಡಿಪಿ ಶೇಕಡ ೭.೪ ರಷ್ಟಿತ್ತು. ಆದರೆ ಹಿಂದಿನ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಅದು ಶೇಕಡ ೬.೫ ರಷ್ಟಿತ್ತು. ಅಂಕಿ-ಅಂಶಗಳು ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ಇಂದು ಬಿಡುಗಡೆ ಮಾಡಿದ ಅಂದಾಜಿನ ಪ್ರಕಾರ, ಇದೇ ಅವಧಿಯಲ್ಲಿ ನಾಮಾಂಕಿತ ಜಿಡಿಪಿ ಶೇಕಡ ೮.೮ರಷ್ಟು ಬೆಳವಣಿಗೆ ದರ ಕಂಡಿದೆ. ಕಳೆದ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ದಾಖಲಾದ ಶೇಕಡ ೧.೫ರ ಬೆಳವಣಿಗೆ ದರಕ್ಕೆ ಹೋಲಿಸಿದರೆ, ಕೃಷಿ ಮತ್ತು ಸಂಬಂಧಿತ ವಲಯಗಳು ಶೇಕಡ ೩.೭ರ ನೈಜ ಒಟ್ಟು ಮೌಲ್ಯವರ್ಧಿತ ಬೆಳವಣಿಗೆ ದರ ಕಂಡಿದೆ.

<><><><>

ಉತ್ತರಾಖಂಡದ ರುದ್ರಪ್ರಯಾಗ ಮತ್ತು ಚಮೋಲಿ ಜಿಲ್ಲೆಗಳಲ್ಲಿ ಮೇಘ ಸ್ಫೋಟದಿಂದ ತೀವ್ರ ಹಾನಿಯಾಗಿದೆ. ಪೀಡಿತ ಪ್ರದೇಶಗಳಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ಯುದ್ಧೋಪಾದಿಯಲ್ಲಿ ನಡೆಸಲಾಗುತ್ತಿದೆ. ಚಮೋಲಿ ಜಿಲ್ಲೆಯ ದೇವಲ್ ಪ್ರದೇಶದಲ್ಲಿ ಒಂದು ಮನೆಗೆ ಹಾನಿಯಾಗಿದ್ದು, ಇಬ್ಬರು ಸಾವನ್ನಪ್ಪಿದ್ದಾರೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ರುದ್ರಪ್ರಯಾಗ ಜಿಲ್ಲಾಧಿಕಾರಿ ಪ್ರತೀಕ್ ಜೈನ್ ಮಾತನಾಡಿ, ರುದ್ರಪ್ರಯಾಗ ಜಿಲ್ಲೆಯ ಬಸುಕೇದಾರ್ ಪ್ರದೇಶದಲ್ಲಿ, ಅತಿಯಾದ ಮಳೆಯಿಂದಾಗಿ ತೀವ್ರ ಹಾನಿಯಾಗಿದೆ. ಕೆಲವು ವ್ಯಕ್ತಿಗಳು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಸಾಧ್ಯತೆಯಿದೆ ಎಂದು ಹೇಳಿದರು.

<><><><>

ಭಾರತವನ್ನು ವಿಶ್ವ ಗುರುವನ್ನಾಗಿಸಲು ಯುವಕರು ಮುಂದಾಗಬೇಕು ಎಂದು ಕೇಂದ್ರ ಸಂವಹನ ಮತ್ತು ಅಭಿವೃದ್ಧಿ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ಕರೆ ನೀಡಿದ್ದಾರೆ. ದೆಹಲಿಯ ಐಐಟಿಯಲ್ಲಿ ಇಂದು ನಡೆದ ಟೆಕ್ ಫೆಸ್ಟ್ ಉದ್ದೇಶಿಸಿ ಮಾತನಾಡಿದ ಅವರು, ಅತ್ಯಾಧುನಿಕ ತಂತ್ರಜ್ಞಾನದಲ್ಲಿ ಭಾರತ ಗಮನಾರ್ಹವಾಗಿ ಬೆಳವಣಿಗೆ ಕಾಣುತ್ತಿದೆ ಎಂದ ಅವರು, ದೂರಸಂಪರ್ಕ ತಂತ್ರಜ್ಞಾನ ಅಭಿವೃದ್ಧಿ ನಿಧಿ ಅಡಿಯಲ್ಲಿ ಈಗಾಗಲೇ ೧೨೦ ಯೋಜನೆಗಳಲ್ಲಿ ಹೂಡಿಕೆ ಮಾಡಲಾಗಿದೆ. ೬ಜಿ ತಂತ್ರಜ್ಞಾನದಲ್ಲಿ ಜಾಗತಿಕ ನಾಯಕನಾಗಿ ಹೊರಹೊಮ್ಮುವುದು ಮತ್ತು ೨೦೩೦ರ ವೇಳೆಗೆ ಜಾಗತಿಕ ಪೇಟೆಂಟ್‌ಗಳಲ್ಲಿ ಕನಿಷ್ಠ ಶೇಕಡ ೧೦ರಷ್ಟು ಕೊಡುಗೆ ನೀಡುವುದು ಭಾರತದ ಗುರಿಯಾಗಿದೆ ಎಂದು ತಿಳಿಸಿದರು.

<><><><>

ಪ್ಯಾರಿಸ್‌ನ ಅಡಿಡಾಸ್ ಅರೆನಾದಲ್ಲಿ ಇಂದು ೨೦೨೫ರ ಬಿಡಬ್ಲ್ಯೂಎಫ್ ವಿಶ್ವ ಚಾಂಪಿಯನ್ ಶಿಪ್‌ನ ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿಂದು ಇಂಡೋನೇಷಿಯಾದ ಕುಸುಮಾ ವರದಾನಿ ವಿರುದ್ಧ ಭಾರತದ ಬ್ಯಾಡ್ಮಿಂಟನ್ ತಾರೆ ಪಿ.ವಿ. ಸಿಂಧೂ ೨೧-೧೪, ೧೩-೨೧ ಮತ್ತು ೨೧-೧೬ ಸೆಟ್‌ಗಳಿಂದ ಪರಾಭವಗೊಂಡಿದ್ದಾರೆ. ಇನ್ನೊಂದೆಡೆ ಪುರುಷರ ಡಬಲ್ಸ್ ವಿಭಾಗದ

ಕ್ವಾರ್ಟರ್ ಫೈನಲ್‌ನಲ್ಲಿಂದು ಸಾತ್ವಿಕ ಸಾಯಿರಾಜ್ ರಾಂಕಿರೆಡ್ಡಿ - ಚಿರಾಗ್‌ಶೆಟ್ಟಿ ಜೋಡಿಯು ಮಲೇಷಿಯಾದ ಆರನ್ ಚಿಯಾ ಮತ್ತು ಸೊಹ್ ವುಯಿ ಯಿಕ್ ಜೋಡಿಯನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>